*

**ಓಎಸ್ ನಂಃ 67/2015**

**ಪಿಡಬ್ಲೂಃ 1**

**<u>ಸಾಕ್ಷಿಗೆ ದಿನಾಂಕ 07-03-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ.ವಿ.ಎಮ್.ಎ. ವಕೀಲರಿಂದ</u>**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

ಸರ್ವೆ ನಂಬರ್ 100ರ 1954-55ರ ಕೈಬರಹದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-1 ಎಂದು, ಸರ್ವೆ ನಂಬರ್ 100ರ 1979-79 ರಿಂದ 1980-82ರ ಕೈಬರಹದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು, ಸರ್ವೆ ನಂಬರ್ 100ರ ಒಂದು ದೃಢೀಕೃತ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-3 ಎಂದು, ಪ್ರತಿವಾದಿ ಕಂಪನಿಯವರು ಸಾಕ್ಷಿಗೆ ನೀಡಿದ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ-4 ಎಂದು, ದಿಃ 04.05.2016ರ ಲೀಸ್ ಡೀಡ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-5 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು,

ಚಿತ್ತಾಪೂರ.